**ಅಸಲು ದಾವಾ ಸಂಖ್ಯೆ: 327/2026**

**ಪಿಡಬ್ಲೂ -1**

**ದಿಃ 24-06-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**
**ಮುಂದುವರೆದ ಮುಖ್ಯ ವಿಚಾರಣೆ ವಾದಿಯ ಪರ ವಕೀಲರಾದ ಶ್ರೀ. DKK ರವರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದೇನೆ. ಅದರಲ್ಲಿ ಬರೆದ ಸಂಗತಿಗಳು ನಿಜವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದೇ ಇರುತ್ತದೆ.

ನಾನು ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಈ ಕೆಳಗಿನಂತೆ ಗುರುತಿಸಲಾಯಿತು.

ನನ್ನ ಸಹೋದರ ದೇವಪ್ಪ ರವರ ಮರಣ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-1 ಎಂದು,

ನನ್ನ ತಂದೆ ಸಿದ್ರಾಯಿ ರವರ ಮರಣ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-2 ಎಂದು,

ನನ್ನ ತಾಯಿ ಇಂದುಬಾಯಿ ರವರ ಮರಣ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-3 ಎಂದು,

ಗೌಂಡವಾಡ ಗ್ರಾಮದ ಸರ್ವೆ ನಂಬರ 89/18 ರ ಪಹಣಿ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-4 ಎಂದು,

ನನ್ನ ಆಧಾರ ಕಾರ್ಡನ ಪ್ರತಿ ಹಾಜರುಪಡಿಸಿರುತ್ತೇನೆ. ಅದನ್ನು ಅದರ ಮೂಲ ದಾಖಲೆಯೊಂದಿಗೆ ಹೋಲಿಕೆ ಮಾಡಿ ನೋಡಿ ನಿಪಿ- 5 ಎಂದು ಗುರುತಿಸಿ, ಮೂಲ ದಾಖಲೆಯನ್ನು ಸಾಕ್ಷಿಗೆ ಹಿಂದಿರುಗಿಸಲಾಯಿತು.

ರಣಜುಂಜರ ದಿನಪತ್ರಿಕೆ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-6 ಎಂದು, ಅದರಲ್ಲಿನ ಪತ್ರಿಕಾ ಪ್ರಕಟಣೆಯ ಭಾಗವನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

**ಪ್ರತಿವಾದಿಯರು ಮತ್ತು ಅವರ ಪರ ವಕೀಲರು ಗೈರು ಹಾಜರಿಯಾಗಿದ್ದು ಸಾಕ್ಷಿಯ ಪಾಟೀ ಸವಾಲಿಗೆ ಮುಂದಿನ ದಿನಾಂಕವನ್ನು ನೀಡಲಾಯಿತು.**

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ ಸರಿಯಿದೆ.

Sd/-

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಧೀಶರು,

ಬೆಳಗಾವಿ.